ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೊಂದನೆಯ ಅಧಿವೇಶನ
ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಅತಿಥಿ ಉಪನ್ಯಾಸಕರ ಕುರಿತು

ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

82 (860) ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು
ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಅತಿಥಿ ಉಪನ್ಯಾಸಕರು ಕೆಲಸವಿಲ್ಲದೆ ಬೀದಿ ಬದಿಯಲ್ಲಿ ತಿಂಡಿ ಮಾರುವುದು, ತರಕಾರಿ ಮಾರುವುದು ಇಂತಹ ಸಣ್ಣಪುಟ್ಟ ಕೆಲಸಗಳಲ್ಲಿ ತೊಡಗಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ ಅತಿಥಿ ಉಪನ್ಯಾಸಕರನ್ನು ಕೆಲಸಕ್ಕೆ ತೆಗೆದುಕೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ಒದಗಿಸುವುದು)